**ಕರ್ನಾಟಕ ವಿಧಾನ ಪರಿಷತ್ತು**

**135ನೇ ಅಧಿವೇಶನ**

| | |
|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: | 115 |
| ಸದಸ್ಯರ ಹೆಸರು | ಶ್ರೀ ಎಸ್.ನಾಗರಾಜ್ (ಸಂದೇಶ ನಾಗರಾಜ್), (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ: | 10-07-2018 |
| ಉತ್ತರಿಸುವ ಸಚಿವರು: | ಮಾನ್ಯ ಲೋಕೋಪಯೋಗಿ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಚಾಮುಂಡಿ ಬೆಟ್ಟದಿಂದ ಉತ್ತನಹಳ್ಳಿಗೆ ಹೋಗುವ ಬೆಟ್ಟದ ಮಾರ್ಗದಲ್ಲಿ ಅಲ್ಲಲ್ಲಿ ತಡೆಗೋಡೆ ಕುಸಿದು ಅಪಾಯಕಾರಿ ಸ್ಥಿತಿ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಚಾಮುಂಡಿ ಬೆಟ್ಟದಿಂದ ಉತ್ತನಹಳ್ಳಿಗೆ ಹೋಗುವ ಬೆಟ್ಟದ ಮಾರ್ಗದಲ್ಲಿ ಅಲ್ಲಲ್ಲಿ ತಡೆಗೋಡೆ ಕುಸಿದು ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಕಡಿದಾದ ತಿರುವುಗಳು ಇರುವ ಕಡೆ ತಡೆಗೋಡೆಗಳು ಕುಸಿದಿದ್ದು, ಈ ಮಾರ್ಗದಲ್ಲಿ ಪ್ರತಿನಿತ್ಯ ಸಾವಿರಾರು ವಾಹನಗಳು ಸಂಚರಿಸುವುದರಿಂದ ಸಂಭವನೀಯ ಅಪಾಯ ತಡೆಗಟ್ಟಲು ತಾತ್ಕಾಲಿಕ ಕ್ರಮ ಜರುಗಿಸುವುದರ ಜೊತೆಗೆ, ತಡೆಗೋಡೆಯನ್ನು ಬೇಗ ನಿರ್ಮಿಸಲು ಕ್ರಮ ಜರುಗಿಸಲಾಗುವುದೇ? | ಚಾಮುಂಡಿ ಬೆಟ್ಟದಿಂದ ಉತ್ತನಹಳ್ಳಿಗೆ ಹೋಗುವ ರಸ್ತೆಯು ಜಿಲ್ಲಾ ಮುಖ್ಯ ರಸ್ತೆಯಾಗಿರುತ್ತದೆ. ಈ ರಸ್ತೆಯ ಒಟ್ಟು ಉದ್ದ 3.20 ಕಿ.ಮೀ ಇರುತ್ತದೆ. ಸದರಿ ರಸ್ತೆಯಲ್ಲಿ ಈ ಹಿಂದೆ ನಿರ್ಮಾಣ ಮಾಡಿರುವ ತಡೆಗೋಡೆಗಳು ಕಳೆದ ವರ್ಷ ದಿನಾಂಕ:26.9.2017ರಂದು ಸುರಿದ ಭಾರಿ ಮಳೆಯಿಂದಾಗಿ ಚಾಮುಂಡಿ ಬೆಟ್ಟದಿಂದ ಉತ್ತನಹಳ್ಳಿಗೆ ಹೋಗುವ ರಸ್ತೆಯಲ್ಲಿ ಈ ಕೆಳಕಂಡ ಸರಪಳಿಗಳಲ್ಲಿ ತಡೆಗೋಡೆಗಳು ಕುಸಿದು ಬಿದ್ದಿದ್ದು, ಕುಸಿದ ತಡೆಗೋಡೆಗಳನ್ನು ತೆರವುಗೊಳಿಸಿ ರಸ್ತೆಯನ್ನು ತಾತ್ಕಾಲಿಕವಾಗಿ ವಾಹನಗಳ ಸುಗಮ ಸಂಚಾರಕ್ಕೆ ಅನುವುಮಾಡಿಕೊಡಲಾಗಿರುತ್ತದೆ. |

| ಕ್ರಮ ಸಂಖ್ಯೆ | ಸರಪಳಿ | ಬಿದ್ದಿರುವ ತಡೆಗೋಡೆ ಸ್ಥಳದ ಸಂಖ್ಯೆ | ಬಿದ್ದಿರುವ ತಡೆಗೋಡೆ ಉದ್ದ (ಮೀಟರ್‌ಗಳಲ್ಲಿ) |
|---|---|---|---|
| 1. | 0.40 ಕಿ.ಮೀ | 1 | 3.00 |
| 2 | 0.90 ಕಿ.ಮೀ | 1 | 3.50 |
| 3 | 1.30 ಕಿ.ಮೀ | 1 | 5.00 |
| 4 | 1.35 ಕಿ.ಮೀ | 2 | 6.00 |
| 5 | 1.40 ಕಿ.ಮೀ | 1 | 3.50 |
| 6 | 1.50 ಕಿ.ಮೀ | 1 | 60.00 |
| 7 | 1.65 ಕಿ.ಮೀ | 1 | 2.50 |
| 8 | 2.00 ಕಿ.ಮೀ | 1 | 15.00 |
| 9 | 2.30 ಕಿ.ಮೀ | 1 | 16.50 |
| 10 | 2.33 ಕಿ.ಮೀ | 1 | 10.00 |
| | ಒಟ್ಟು | 11 | 125.00 |

ಆದಾಗ್ಯೂ ಕುಸಿದ ತಡೆಗೋಡೆಗಳನ್ನು ದುರಸ್ಥಿ / ಮರು ನಿರ್ಮಾಣ ಮಾಡಲು ಅಂದಾಜು ಪಟ್ಟಿಯನ್ನು ರೂ.22.50 ಲಕ್ಷಗಳಿಗೆ ತಯಾರಿಸಿ ಮಳೆಹಾನಿ ದುರಸ್ಥಿ ಯೋಜನೆಯಡಿ ಅನುದಾನ ಒದಗಿಸಿಕೊಡುವಂತೆ ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ರವರಿಗೆ ದಿನಾಂಕ: 03-11-2017 ರ ಪತ್ರದಲ್ಲಿ ಕೋರಲಾಗಿದ್ದು, ಮಳೆಹಾನಿ ದುರಸ್ಥಿ ಯೋಜನೆಯಡಿ ಅನುದಾನವನ್ನು ಒದಗಿಸಲು ಸಾಧ್ಯವಿಲ್ಲವಾದ್ದರಿಂದ ಇಲಾಖಾ ವತಿಯಿಂದಲೇ ಕಾಮಗಾರಿಯನ್ನು ನಿರ್ವಹಿಸಲು ದಿನಾಂಕ:12.01.2018 ರ ಪತ್ರದಲ್ಲಿ ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ರವರು ಕೋರಿರುತ್ತಾರೆ. ಸದರಿ ಕಾಮಗಾರಿಯನ್ನು ಕೈಗೊಳ್ಳಲು ರೂ.22.50 ಲಕ್ಷಗಳ ಅನುದಾನದ ಅವಶ್ಯಕತೆಯಿದ್ದು, ಅನುದಾನದ ಲಭ್ಯತೆಗನುಸಾರ ಕಾಮಗಾರಿಯನ್ನು ಕೈಗೊಳ್ಳಲು ಕ್ರಮವಹಿಸಲಾಗುವುದು.

ಲೋಇ 59 ಸಿಕ್ಯೂಎನ್ 2018

(ಹೆಚ್.ಡಿ. ರೇವಣ್ಣ)
ಲೋಕೋಪಯೋಗಿ ಸಚಿವರು